ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿರವರ ನ್ಯಾಯಾಲಯ,
ಯಳಂದೂರು.

**CC** 121/2019

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಭಾಗ್ಯರಾಜು | ಪ್ರಮಾಣ ಮಾಡಿದ ದಿನಾಂಕ 27.03.2024 |
| ತಂದೆಯ ಹೆಸರು | : | ಪುಟ್ಟಲಿಂಗಶೆಟ್ಟಿ | |
| ವಯಸ್ಸು | : | 40 ವರ್ಷ | |
| ವೃತ್ತಿ | : | ಕೂಲಿ ಕೆಲಸ | **CW**/3 |
| ವಾಸಸ್ಥಳ | : | ದುಗ್ಗಹಟ್ಟಿ | **PW**/3 |

ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ರವರಿಂದಃ

ಈ ಪ್ರಕರಣದ ಆರೋಪಿ ಗೊತ್ತಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ಸಾಕ್ಷಿಯು ನಿಪಿ-2 ರಲ್ಲಿ ಇರುವ ತಮ್ಮ ಸಹಿಯನ್ನು ಸಾಕ್ಷಿಯು ನೋಡಿ ಗುರುತಿಸಿದ ಕಾರಣ ಅದನ್ನು ಈಗ ನಿಪಿ-2(ಸಿ) ಎಂದು ಗುರುತಿಸಲಾಯಿತು. ನಿಪಿ-2 ರಲ್ಲಿ ಏನು ಬರೆದಿದೆ ನನಗೆ ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ವಸ್ತುವನ್ನು ಜಪ್ತುಪಡಿಸಿಲ್ಲ. ಪೊಲೀಸರು ದುಗ್ಗಹಟ್ಟಿಯಲ್ಲಿ ಗಸ್ತಿಗಾಗಿ ಬಂದಾಗ ಅವರ ಕೋರಿಕೆಯ ಮೇರೆಗೆ ನಾನು ನಿಪಿ-2 ಕ್ಕೆ ಸಹಿ ಮಾಡಿರುತ್ತೇನೆ. ಈ ಪ್ರಕರಣ ಯಾವ ಪ್ರಕರಣ ಎಂದೂ ಸಹ ನನಗೆ ಗೊತ್ತಿಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆಯನ್ನು ನೀಡಿಲ್ಲ.

(ಈ ಹಂತದಲ್ಲಿ ಮಾನ್ಯ ಎಪಿಪಿರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಗಿದೆ.)

ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದಃ

ದಿನಾಂಕ 17.08.2018 ರಂದು ಕೆಸ್ತೂರು ಗ್ರಾಮದಲ್ಲಿ ರಾತ್ರಿ 7-45 ಗಂಟೆ ಸಮಯದಲ್ಲಿ ಪೊಲೀಸರು ನನ್ನನ್ನು ಮತ್ತು ಚಾಸಾ-2 ರವರನ್ನು ಕರೆದು ಅಮಾನತು ಮಹಜರಿಗೆ ಸಾಕ್ಷಿಯಾಗುವಂತೆ ಕೇಳಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನನ್ನನ್ನು ಮತ್ತು ಚಾಸಾ-2 ರವರನ್ನು ಪೊಲೀಸರು ಯಳಂದೂರು ಪೊಲೀಸ್ ಠಾಣೆಗೆ ಕರೆದುಕೊಂಡು ಹೋಗಿರುತ್ತಾರೆ ಎಂದರೆ ಸರಿಯಲ್ಲ. ನನ್ನ ಸಮಕ್ಷಮ ಪೊಲೀಸರು ಆಗ ಮದ್ಯ ತುಂಬಿದ್ದ 144 ಮದ್ಯದ

ಪೌಚುಗಳನ್ನು ಮತ್ತು ಒಂದು ಪ್ಲಾಸ್ಟಿಕ್ ಬ್ಯಾಗ್ ಹಾಗೂ ಒಂದು ದ್ವಿಚಕ್ರ ವಾಹನ ನೋಂದಣಿ ಸಂಖ್ಯೆ **KA**-10 **U**-0500 ವಾಹನವನ್ನು ಜಪ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಈ 144 ಮಧ್ಯದ ಪೌಚುಗಳ ಪೈಕಿ 30 ಪೌಚಗುಳನ್ನು ಪ್ರತ್ಯೇಕಿಸಿ ಒಂದೊಂದು ಪೌಚುಗಳನ್ನು ಬಿಳಿ ಚೀಲದಲ್ಲಿ ಕಟ್ಟಿ **"S"** ಎಂಬ ಅಕ್ಷರದಿಂದ ಸೀಲು ಮಾಡಿ ಪಂಚನಾಮೆ ಮುಖಾಂತರ ನನ್ನ ಮತ್ತು ಚಾಸಾ-3 ರವರ ಸಮಕ್ಷಮ ಜಪ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ-2 ನ್ನು ನನಗೆ ಮತ್ತು ಚಾಸಾ-3 ರವರಿಗೆ ಓದಿ ಹೇಳಿ ನಂತರ ನಮ್ಮ ಸಹಿಗಳನ್ನು ಪಡೆಯಲಾಗಿರುತ್ತದೆ ಎಂದರೆ ಸರಿಯಲ್ಲ. ನಿಪಿ-2 ನ್ನು ರಾತ್ರಿ 8 ರಿಂದ 9 ಗಂಟೆ ವರೆಗೆ ಮಾಡಲಾಗಿರುತ್ತದೆ ಎಂದರೆ ನನಗೆ ಗೊತ್ತಿಲ್ಲ. ಈಗ ಓದಿ ಹೇಳಿದಂತೆ ನಾನು ತನಿಖಾಧಿಕಾರಿಯ ಸಮಕ್ಷಮ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ನಿರಾಕರಿಸಿದ ಹೇಳಿಕೆಯನ್ನು ನಿಪಿ-5 ಎಂದು ಗುರುತಿಸಲಾಯಿತು. ನನಗೆ ಎಲ್ಲಾ ವಿಚಾರಗಳು ಗೊತ್ತಿದ್ದರುೂ ಸಹ, ನಾನು ಈ ಪ್ರಕರಣದಲ್ಲಿ ಪಂಚನಾಗಿದ್ದರೂ ಸಹ ಆರೋಪಿಯನ್ನು ಶಿಕ್ಷೆಯಿಂದ ಪಾರು ಮಾಡುವ ಉದ್ದೇಶದಿಂದ ನ್ಯಾಯಾಲಯದ ಮುಂದೆ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

(ಪಾಟೀ ಸವಾಲು: ಆರೋಪಿ ಪರ ವಕೀಲರರು ಪಾಟೀ ಸವಾಲು ಇರುವುದಿಲ್ಲ ಎಂದು ನುಡಿದಿರುತ್ತಾರೆ)

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

27.03.2024.
ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾದ ನ್ಯಾಯಾಲಯ ಯಳಂದೂರು.